**ಸಾಕ್ಷಿಗೆ ದಿನಾಂಕ 15.05.2025 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಂದುವರೆದ ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ
(ಅರ್ಜಿದಾರರು ವೀಲ್ ಚೇರಿನ ಸಹಾಯದಿಂದ ಬಂದಿರುತ್ತಾರೆ)

1. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 3 | ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿ |
| ನಿ.ಪಿ 4 | ಕಚ್ಚಾ ನಕಾಶೆಯ ದೃಢೀಕೃತ ಪ್ರತಿ |
| ನಿ.ಪಿ 5 | ಕಲಂ 133 ರಡಿ ನೀಡಿದ ನೋಟೀಸು ದೃಢೀಕೃತ ಪ್ರತಿ |
| ನಿ.ಪಿ 6 | ಕಲಂ 133 ರಡಿ ನೀಡಿದ ನೋಟೀಸಿಗೆ ಉತ್ತರ ದೃಢೀಕೃತ ಪ್ರತಿ |
| ನಿ.ಪಿ 7 | ಎಂ ವಿ ಐ ವರದಿಯ ದೃಢೀಕೃತ ಪ್ರತಿ |
| ನಿ.ಪಿ 8 | ಗಾಯದ ಪ್ರಮಾಣ ಪತ್ರ |
| ನಿ.ಪಿ 9 | ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿ |
| ನಿ.ಪಿ 10 | ಆಧಾರ್ ಕಾರ್ಡ್‌ನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.) |
| ನಿ.ಪಿ 11 | ಡಿಸ್ಚಾರ್ಜ್ ಸಮರಿ |
| ನಿ.ಪಿ 12 | 2 ಮೆಡಿಕಲ್ ಬಿಲ್ಲುಗಳು ಮೊತ್ತ ರೂ.2,49,260/- (ಅವುಗಳನ್ನು ಕ್ರಮವಾಗಿ ಕ್ರಮ ಸಂಖ್ಯೆ 1 ಮತ್ತು 2 ಎಂದು ತೋರಿಸಲಾಗಿರುತ್ತದೆ.) |

3. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು: 2ನೇ ಎದುರುದಾರರ ಪರ ಶ್ರೀ. ಬಿ ಆರ್ ವಿ ವಕೀಲರಿಂದ:**

4. ನಾನು ವಿದ್ಯಾಭ್ಯಾಸ ಮಾಡಿರುವುದಿಲ್ಲ. ಅಪಘಾತದ ದಿನಾಂಕ ನನಗೆ ನೆನಪಿರುವುದಿಲ್ಲ. ಅಪಘಾತದ ನಂತರ ನನಗೆ ಪ್ರಜ್ಞೆ ಇರದ ಕಾರಣ ಯಾವ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಮ್ಮೂರಿನ ರಾಜೇಗೌಡರ ಜಮೀನಿನಲ್ಲಿ ಬೋರ್ ವೆಲ್ ತೋಡುತ್ತಿದ್ದನ್ನು ರಸ್ತೆಯ ಪಕ್ಕದಲ್ಲಿ ನಿಂತು ನೋಡುತ್ತಿದ್ದಾಗ ಬೋರ್ ವೆಲ್ ಉಪಕರಣಗಳನ್ನು ಸಾಗಿಸುತ್ತಿದ್ದ ವಾಹನ ಅಪಘಾತ ಪಡಿಸಿರುತ್ತದೆ. ಅಪಘಾತವಾದ ದಿನವೇ ನನ್ನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ನಿ.ಪಿ.11ರ ಡಿಸ್ಚಾರ್ಜ್ ಸಮರಿಯ ಪ್ರಕಾರ ದಿ.12.04.2024ರಂದು ಆಸ್ಪತ್ರೆಗೆ ದಾಖಲಾಗಿರುತ್ತೇನೆ ಎಂದು ನಮೂದಾಗಿದೆ ಎಂದರೆ ನನಗೆ ಗೊತ್ತಿಲ್ಲ. 1ನೇ ಎದುರುದಾರರ ವಾಹನ ಅಪಘಾತ ಪಡಿಸಿರುವುದಿಲ್ಲ, ಬೇರೆ ಅಪಘಾತದಲ್ಲಿ ಗಾಯಗೊಂಡಿರುತ್ತೇನೆ ಎಂದರೆ ಸರಿಯಲ್ಲ. ದಿ.12.04.2024ರಂದು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಂಡಿದ್ದರೂ ಸಹಾ ಪರಿಹಾರಕ್ಕೋಸ್ಕರ ದಿ.13.04.2024ರಂದು ಅಪಘಾತವಾಗಿದೆ ಎಂದು ಸುಳ್ಳು ದೂರು ನೀಡಿರುತ್ತೇನೇ ಎಂದರೆ ಸರಿಯಲ್ಲ.

5. ಈ ಅಪಘಾತದಲ್ಲಿ ನನಗೆ ಯಾವುದೇ ರೀತಿಯ ಗಾಯಗಳಾಗಿಲ್ಲ ಎಂದರೆ ಸರಿಯಲ್ಲ. ನಾನು ಬೇರೆ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ನನಗೆ ಆದ ಮೂಳೆ ಮುರಿತದ ಗಾಯಗಳು ಗುಣವಾಗಿದೆ ಎಂದರೆ ಸರಿಯಲ್ಲ. ನಾನು ಮನೆಯ ಹತ್ತಿರ ವಾಕರ್ ಸಹಾಯದಿಂದ

ನಡೆದಾಡುತ್ತೇನೆ. ನನಗೆ ಯಾವುದೇ ಮೂಳೆ ಮುರಿತದ ಗಾಯವಾಗದೇ ಇದ್ದರೂ ಸಹಾ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ವೈದ್ಯಕೀಯ ಖರ್ಚು 5ಲಕ್ಷ ಆಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ.12 ಸೃಷ್ಟಿತ ದಾಖಲೆ ಎಂದರೆ ಸರಿಯಲ್ಲ. ಆಸ್ಪತ್ರೆಗೆ ದಾಖಲಾಗುವಾಗ ನನ್ನ ವಯಸ್ಸು 65 ವರ್ಷ ಎಂದು ನಮೂದಿಸಿರುತ್ತೇನೆ ಎಂದರೆ ನಾನು ವಯಸ್ಸಿನ ಬಗ್ಗೆ ಹೇಳಿರುವುದಿಲ್ಲ. ನನ್ನ ವಯಸ್ಸು 65 ವರ್ಷಕ್ಕಿಂತ ಜಾಸ್ತಿ ಆಗಿದ್ದರು ಸಹಾ ನನ್ನ ವಯಸ್ಸು 56 ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ಕುಟುಂಬಕ್ಕೆ ಪಡಿತರ ಚೀಟಿ ಇದೆ. ಸದರಿ ದಾಖಲೆಯ ಪ್ರಕಾರ ನನ್ನ ವಯಸ್ಸು 57 ವರ್ಷಕ್ಕಿಂತ ಜಾಸ್ತಿಯಾಗಿದೆ ಎಂದರೆ ಎಂದರೆ ಸರಿಯಲ್ಲ. ನಾನು ಅಪಘಾತಕ್ಕೂ ಮೊದಲು ವ್ಯವಸಾಯ ಮಾಡಿ ವರ್ಷಕ್ಕೆ 10 ಲಕ್ಷ ಸಂಪಾದಿಸುತ್ತಿದ್ದೆನು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**1ನೇ ಎದುರುದಾರರು ಏಕಪಕ್ಷೀಯ**

**ಮರುವಿಚಾರಣೆ-ಇಲ್ಲ**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**